# ವಿಡಿಐಡಿಯಲ್ಲಿ ದಾಂಡಿಯಾ ಕಾರ್ಯಕ್ರಮ ಯಶಸ್ವಿ

**ಸಾಗರ ಸಾಮ್ರಾಟ ಸಮಾಚಾರ**

**ಹಳಿಯಾಳ:** ಕೆ ಎಲ್ ಎಸ್ ವಿ ಡಿ ಐ ಟಿ ಹಳಿಯಾಳದಲ್ಲಿ ಇತ್ತೀಚೆಗೆ ಭಾರತೀಯ ಸಂಸ್ಕೃತಿ ಬಿಂಬಿಸುವ ದಾಂಡಿಯಾ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು. ದೇವಿಯ ಪೂಜೆ ಯೊಂದಿಗೆ ಆರಂಭವಾದ ಸ್ಪರ್ಧೆಯಲ್ಲಿ ಮಹಾವಿದ್ಯಾಲಯದ 70ಕ್ಕೂ ಅಧಿಕ ವಿದ್ಯಾರ್ಥಿನಿಯರ ಎಂಟು ತಂಡಗಳು ಭಾಗವಹಿಸಿದ್ದವು. ಭಾರತದ ವಿವಿಧ ರಾಜ್ಯಗಳ ಸಂಸ್ಕೃತಿಯ ಬಿಂಬಿಸುವ ಪೋಷಾಕುಗಳನ್ನು ಧರಿಸಿ ನೃತ್ಯ ಪ್ರದರ್ಶಿಸಿದರು. ಶ್ರೀರಕ್ಷಾ ಯು, ಶ್ರೇಯಾ ಕೆ, ಶ್ರೀರಕ್ಷಾ ಬಿ, ಸ್ನೇಹಾ ಹೆಚ್, ಶಿವಾನಿ ಎಸ್, ರಿತಿಕಾ ಪಿ, ಈಶ್ವರಿ ಎನ್, ಸೌಮ್ಯ ಪಿ ಇವರನ್ನು ಒಳಗೊಂಡ ಪ್ರಥಮ ವರ್ಷದ ವಿದ್ಯಾರ್ಥಿನಿಯರ ತಂಡ ದಾಂಡಿಯಾ ಸ್ಪರ್ಧೆಯಲ್ಲಿ ವಿಜಯಶಾಲಿಯಾಯಿತು. ವಿಜೇತರಿಗೆ ಪುರಸ್ಕರಿಸಿ ಮಾತನಾಡಿದ ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ಭಾರತೀಯ ಸಂಸ್ಕೃತಿಯ ಅರಿವನ್ನು ಜಾಗೃತಗೊಳಿಸಲು ಇಂತಹ ಕಾರ್ಯಕ್ರಮಗಳು ಸಹಕಾರಿಯಾಗುವುದು ಎಂದು ಹೇಳಿದರು. ಪ್ರೊ. ಲಕ್ಷ್ಮಿಹಟ್ಟಿ ಹೋಳಿ, ಡಾ. ಸ್ನೇಹಾ ಕುಲಕರ್ಣಿ, ಪ್ರೊ. ಫರಜಾನ ನದಾಫ್, ಸುನೀಲ ಯಾರಗಟ್ಟಿ ಒಳಗೊಂಡ ಮಹಾವಿದ್ಯಾಲಯದ ಸಾಂಸ್ಕೃತಿಕ ವಿಭಾಗದ ವತಿಯಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.





# ವಿಡಿಐಡಿಯಲ್ಲಿ ದಾಂಡಿಯಾ ಕಾರ್ಯಕ್ರಮ ಯಶಸ್ವಿ

ಸಾಗರ ಸಾಮ್ರಾಟ ಸಮಾಚಾರ

**ಹಳಿಯಾಳ:** ಕೆ ಎಲ್ ಎಸ್ ವಿ ಡಿ ಐ ಟಿ ಹಳಿಯಾಳದಲ್ಲಿ ಇತ್ತೀಚೆಗೆ ಭಾರತೀಯ ಸಂಸ್ಕೃತಿ ಬಿಂಬಿಸುವ ದಾಂಡಿಯಾ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು. ದೇವಿಯ ಪೂಜೆ ಯೊಂದಿಗೆ ಆರಂಭವಾದ ಸ್ಪರ್ಧೆಯಲ್ಲಿ ಮಹಾವಿದ್ಯಾಲಯದ 70ಕ್ಕೂ ಅಧಿಕ ವಿದ್ಯಾರ್ಥಿನಿಯರ ಎಂಟು ತಂಡಗಳು ಭಾಗವಹಿಸಿದ್ದವು. ಭಾರತದ ವಿವಿಧ ರಾಜ್ಯಗಳ ಸಂಸ್ಕೃತಿಯ ಬಿಂಬಿಸುವ ಪೋಷಾಕುಗಳನ್ನು ಧರಿಸಿ ನೃತ್ಯ ಪ್ರದರ್ಶಿಸಿದರು. ಶ್ರೀರಕ್ಷಾ ಯು, ಶ್ರೇಯಾ ಕೆ, ಶ್ರೀರಕ್ಷಾ ಬಿ, ಸ್ನೇಹಾ ಹೆಚ್, ಶಿವಾನಿ ಎಸ್, ರಿತಿಕಾ ಪಿ, ಈಶ್ವರಿ ಎನ್, ಸೌಮ್ಯ ಪಿ ಇವರನ್ನು ಒಳಗೊಂಡ ಪ್ರಥಮ ವರ್ಷದ ವಿದ್ಯಾರ್ಥಿನಿಯರ ತಂಡ ದಾಂಡಿಯಾ ಸ್ಪರ್ಧೆಯಲ್ಲಿ ವಿಜಯಶಾಲಿಯಾಯಿತು. ವಿಜೇತರಿಗೆ ಪುರಸ್ಕರಿಸಿ ಮಾತನಾಡಿದ ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ಭಾರತೀಯ ಸಂಸ್ಕೃತಿಯ ಅರಿವನ್ನು ಜಾಗೃತಗೊಳಿಸಲು ಇಂತಹ ಕಾರ್ಯಕ್ರಮಗಳು ಸಹಕಾರಿಯಾಗುವುದು ಎಂದು ಹೇಳಿದರು. ಪ್ರೊ. ಲಕ್ಷ್ಮಿಹಟ್ಟಿ ಹೋಳಿ, ಡಾ. ಸ್ನೇಹಾ ಕುಲಕರ್ಣಿ, ಪ್ರೊ. ಫರಜಾನ ನದಾಫ್, ಸುನೀಲ ಯಾರಗಟ್ಟಿ ಒಳಗೊಂಡ ಮಹಾವಿದ್ಯಾಲಯದ ಸಾಂಸ್ಕೃತಿಕ ವಿಭಾಗದ ವತಿಯಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.



